2. 500 ರೂಪಾಯಿಗಳಿಗಿಂತ ಕಡಿವೆ ಮೊಬಲಗಿಗೆ ಹುಂಡಿಯು ಕೊಡಲ್ಪಡುವದಿಲ್ಲ.

3. ಅಪ್ಲಿಕೇಷನನ್ನು ಅಂಗೀಕರಿಸುವ ಪಕ್ಷದಲ್ಲಿ ಆ ವಿಚಾರವು ಅಪ್ಲಿಕೇಷ್ಟ ಹಾಕಿರುವವರಿಗೆ ತಿಳಿಸಲ್ಪಡುವದಲ್ಲದೆ, ಸ್ಟೇಟ್ ಹುಜೂರು ಟ್ರೆಜರಿ ಆಫಿಸರಿಗೆ ಹುಂಡಿಯ ಮೊಬಲಗನ್ನು ಮತ್ತು ಕೆಳಗೆ ನಮೂದಿಸಿರುವ ದರದವೇರೆ ಕಮಿಷನನ್ನೂ ತೆಗದು ಕೊಂಡು ಹುಂಡಿಯನ್ನು ಕೊಡುವದಕ್ಕೆ ಅಧಿಕಾರವು ಕೊಡಲ್ಪಡುತ್ತದೆ.

ಹುಂಡಿ ಕೊಡುವ ಖಜಾನೆ ಹೆಸರು.	ಹಣ ಪಾವತಿಯಾಗಬೇಕಾದ ಖಜಾನೆ ಹೆಸರು.	ಕಮಿಷ್ಟ ದರ.
ಸ್ಟೇಟ್ ಹುಜೂರ್.	ಕೋಲಾರ. ತುಮಕೂರು. ಶಿವಮೊಗ್ಗ ಕಡೂರು. ಚಿತ್ರದುರ್ಗ. ಮೈಸೂರು. ಹಾಸನ.	ಶೇಕಡ $\frac{1}{16}$

ಜೆ. ಎಸ್. ಚಕ್ರವರ್ತಿ,
ಕಂಟ್ರೋಲರ್.

ಏಕ್ಸೈಜ್ ಇಲಾಖೆ.

ನೋಟಿಸ್ ನಂಬರು 9898.

ಇದರಿಂದ ಸರ್ವಸ್ಥ ಜನರಿಗೂ ತಿಳಿಯಪಡಿಸುವದೇನಂದರೆ :—ಸ್ರ 1909—10ನೆ ಸಾಲಿನಲ್ಲಿ ಮೈಸೂರು ಸಂಸ್ಥಾನದಲ್ಲಿ ಶೇಂದಿ ಉತಾರು ಮಾಡಲ್ಪಡುವ ಎಲ್ಲಾ ಮರಗಳಿಗೂ ಕೆಂಪು ಬಣ್ಣದಿಂದ ಸಂಖ್ಯೆ ಹಾಕಲ್ಪಡುತ್ತೆ.

ಎಚ್. ಎಚ್. ಸ್ಪಾರ್ಕ್ಸ್,
ಎಕ್ಸೈಜ್ ಕಮಿಷನರ್.

ಫಾರೆಸ್ಟ್ ಇಲಾಖೆ.

ನೋಟಿಫಿಕೇಷನ್.

ತಾರೀಖು 10ನೆ ಮೇ 1909, ಬೊಕ್ಕಾಂ ಚನ್ನಪಟ್ಟಣ.

1. ಇದರಿಂದ ಸರ್ವಸ್ಥ ಜನಗಳಿಗೂ ತಿಳಿಯಪಡಿಸುವದೇನಂದರೆ—ಬೆಂಗಳೂರು ಡಿಸ್ಟ್ರಿಕ್ಟಿನ ಈ ಕೆಳಗೆ ಕಾಣುವ ತಾಲ್ಲೂಕು ಗಳಲ್ಲಿರುವ ಸ್ಟೇಟ್ ಫಾರೆಸ್ಟ್ಸ್ (ಕತರಾವಣೆ ಆದ ಕೂಪುಗಳು ವಿನಹ) ಮತ್ತು ಕಮಿಷ್ಟರಿಯಟ್ ಕಾವಲುಗಳು ಸೇರಿಸಿಕೊಂಡು ಇತರ ಎಲ್ಲಾ ಸರ್ಕಾರ ಜಂಗಲ್ ಮತ್ತು ಬ್ರಂಜರ್ ಜಮ್ರ್ಗಳಲ್ಲಿಯೂ (ಪ್ಲಾಂಟೇಷನ್ಗಳ ವಿನಹ) ಸಹಾ ಇರತಕ್ಕ ತಂಗಡಿ ಮತ್ತು ಕಕ್ಕೆ ಚಕ್ಕೆಗಳನ್ನು 1909ನೆ ಜುಲ್ಯೈ 1ನೆ ತಾರೀಖು ಲಾಗಾಯತು 1911ನೆ ಇಸವಿ ಜೂನ್ ಆಖೈರ್ ವರಿಗೆ ಜಮಾಯಿಸಿ ತೆಗದುಕೊಂಡು ಹೋಗತಕ್ಕ ಬಟ್ಟು ಸ್ವತಂತ್ರ ಹಕ್ಕನ್ನು 1909ನೆ ಇಸವಿ ಜೂನ್ ತಾರೀಖು 7ರಲ್ಲು ಬೆಂಗಳೂರು ನೊಕ್ಕಾಮಿನಲ್ಲಿ ಬೆಂಗಳೂರು ಡಿಸ್ಟ್ರಿಕ್ಟ್ ಡೆಪ್ಯುಟಿ ಕಮಿಷನರವರ ಆಫೀಸಿನಲ್ಲಿ ಡೆಪ್ಯುಟಿ ಕಮಿಷನರವರೊಂದಿಗೆ ಆಗಲಿ ಅಥವಾ ಅವರಿಂದ ನೇಮಕ ಮಾಡಲ್ಪಡುವ ಇತರ ಆಫಿಸರವರೊಂದಿಗೆ ಆಗಲಿ ಡಿಸ್ಟ್ರಿಕ್ಟ್ ಫಾರೆಸ್ಟ್ಸ್ ಆಫಿಸರವರು ತಾಲ್ಲೂಕ್‌ವಾರ್ ಒಹಿರಂಗವಾದ ಹರಾಜ್ ಮೂಲಕ ವಿಕ್ರಯಿಸುತ್ತಾರೆ.

1—7—1909ರ ಲಾಗಾಯತು 30—6—1911ರ ವರಿಗೆ.

(1)	ಬೆಂಗಳೂರು	(6)	ಕ್ಲೋಸ್‌ಸೇಟೆ ಸಾ|| ತಾ||
(2)	ದೇವನಹಳ್ಳಿ	(7)	ಕಾನಕಾನಹಳ್ಳಿ
(3)	ಚನ್ನಪಟ್ಟಣ	(8)	ಮಾಗಡಿ
(4)	ಹೊಸಕೋಟೆ	(9)	ಆನೇಕಲ್
(5)	ನೆಲಮಂಗಲ	(10)	ದೊಡ್ಡಬಳ್ಳಾಪುರ

2. ಹರಾಜ್ ತಾರೀಖಿನ ದಿವಸ ಮಧ್ಯಾಹ್ನ 2 ಘಂಟೆಗೆ ಹರಾಜ್ ಷುರು ಮಾಡಲ್ಪಡುವದು. ಅದೇ ದಿವಸದಲ್ಲಿ ಹರಾಜು ಪೂರೈಸದ ಪಕ್ಷಕ್ಕೆ ಮೂರನೇ ದಿವಸ ಅದೇ ಕಾಲಕ್ಕೆ ಸರಿಯಾಗಿ ಪುನಹ ಹರಾಜು ಮಾಡಲ್ಪಡುವದು.

3. ಮೇಲೆ ವಿವರಿಸಿರುವಂತೆ ತಂಗಡಿ ಮತ್ತು ಕಕ್ಕೆ ಚಕ್ಕೆ ಜಮಾವಣಿ ಹಕ್ಕನ್ನು ಚಡದರಖಾಸ್ತುದಾರನಿಗೆ ವಿೞೇವಾರಿ ಮಾಡಲ್ಪಡುವದು. ಆದರೆ ಹರಾಜು ಡೆಪ್ಯುಟಿ ಕಮಿಷನರವರ ಮಂಜೂರಾತಿಗೆ ಒಳಪಟ್ಟು ಇರುತ್ತೆ. ಯಾವ ದರಖಾಸ್ತನ್ನಾದರೂ ಯಾವ ಕಾರಣವನ್ನು ನಮೂದಿಸದೆ ಅಂಗೀಕರಿಸುವದಕ್ಕೂ ಅಥವಾ ನಿರಾಕರಿಸುವದಕ್ಕೂ ಇರುವ ಹಕ್ಕನ್ನ ಡೆಪ್ಯುಟಿ ಕಮಿಷನರವರು ತಾವೆ ಉಳಿಸಿಕೊಂಡು ಇರುತ್ತಾರೆ.

4. ದರಖಾಸ್ತು ಮಾಡಲು ಅಭಿಪ್ರಾಯವುಳ್ಳ ಜನಗಳು ಖುದ್ದಾಗಲಿ ಅಥವಾ ಅವರುಗಳಿಂದ ಕ್ರಮಪ್ರಕಾರ ಅಪ್ಪಣೆಯನ್ನು ಪಡದ ಏಜಂಟ್ ಯಾ ಮುತಾಲೀಕರ ಮೂಲಕವಾಗಿಯಾಗಲಿ ಹಾಜರಾಗಬೇಕು. ಯಾವ ದರಖಾಸ್ತುದಾರನಾಗಲಿ (100) ಒಂದು ನೂರು ರೂಪಾಯಿಗಳನ್ನ ಠೇವಣಿ ಇಡದ ವಿನಹ ತನಿಗೋಸ್ಕರವಾಗಿ ಆಗಲಿ ಅಥವಾ ಇತರರಿಗೋಸ್ಕರವಾಗಿಯಾಗಲಿ ಸರ್ವಾಲ್ ಮಾಡಲು ಆತನಿಗೆ ಅಪ್ಪಣೆ ಕೊಡಲ್ಪಡುವದಿಲ್ಲ. ಮಂಜೂರ್ಮಾಡಲ್ಪಟ್ಟ ದರಖಾಸ್ತುದಾರರಲ್ಲದ ಇತರ ದರಖಾಸ್ತುದಾರರಿಂದ ಹಾಜರಾದ ಮೊಬಲಗು ಹರಾಜು ಖೈದಾದೊಡನೆ ವಾಪಸು ಮಾಡಲ್ಪಡುವದು. ಆಖೈರ್ ಚಡದರಖಾಸ್ತುದಾರು ಹರಾಜು ಮಂಜೂರಾದ ಸಂಗತಿ ತಮಗೆ ತಿಳಿಸಿದ ಐದು ದಿವಸದೊಳಗೆ ತಾವು ಮೊದಲೇ ಇಟ್ಟಿದ್ದ ಡಿಪಾಜಿಟ್ ಮೊಬಲಗು ಸೇರಿಸಿ ಒಟ್ಟು ಹರಾಜು ಮೊಬಲಗಿನ ಕಾಲು ಹಿಸ್ಸೆ ಮೊಬಲಗನ್ನು ಬೆಂಗಳೂರು ಡಿಸ್ಟ್ರಿಕ್ಟ್ ಟ್ರೆಜರಿಗೆ ಪಾವತಿ ಮಾಡತಕ್ಕದ್ದು. ಹಾಗೆ ಮಾಡದೆ ತಪ್ಪಿದಲ್ಲಿ ಮೊದಲೆ ಇಟ್ಟಿದ್ದ ಠೇವಣಿ ಮೊಬಲಗನ್ನ ಸರ್ಕಾರಕ್ಕೆ ದಂಡವಾಗಿ ಸೇರಿಸಿಕೊಳ್ಳಲ್ಪಡುವದಲ್ಲದೆ ಹರಾಜು ಕ್ರಮ ನಡಿಸುವ ಆಫಿಸರರಿಂದ ಸದರೀ ಜಾಬು ಪುನಹ ಹರಾಜು ಮಾಡಲ್ಪಡುವದು.